**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 73
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 13.02.2024
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಸಚಿವರು

| ಪ್ರಶ್ನೆ | | ಉತ್ತರ |
|---|---|---|
| (ಅ) | ವಿಜಯಪುರ ನಗರ ಪಾಲಿಕೆಯಲ್ಲಿ ಪೌರಕಾರ್ಮಿಕರಿಗೆ ಪ್ರತಿ ತಿಂಗಳು ಸರಿಯಾಗಿ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಿಜಯಪುರ ಮಹಾನಗರ ಪಾಲಿಕೆಯ ಖಾಯಂ ಪೌರಕಾರ್ಮಿಕರಿಗೆ ಎಸ್.ಎಫ್.ಸಿ ವೇತನ ನಿಧಿಯಿಂದ ಹಾಗೂ ನೇರ ಪಾವತಿ ಪೌರಕಾರ್ಮಿಕರಿಗೆ ಎಸ್.ಎಫ್.ಸಿ ಮುಕ್ತನಿಧಿ ಹಾಗೂ ಪಾಲಿಕೆಯ ಸಾಮಾನ್ಯ ನಿಧಿಯಿಂದ ಪ್ರತಿ ತಿಂಗಳು ವೇತನ ಪಾವತಿಸಲಾಗುತ್ತಿದೆ.<br>ಖಾಯಂ ಪೌರಕಾರ್ಮಿಕರಿಗೆ ಡಿಸೆಂಬರ್-2023 ರವರೆಗೆ ಹಾಗೂ ನೇರ ಪಾವತಿ ಪೌರಕಾರ್ಮಿಕರಿಗೆ ನವೆಂಬರ್-2023 ರವರೆಗೆ ಈಗಾಗಲೇ ವೇತನ ಪಾವತಿ ಮಾಡಲಾಗಿದೆ.<br>2023-24ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿಯ 3ನೇ ಕಂತಿನ ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ:ನಅಇ 121 ಎಸ್.ಎಫ್.ಸಿ 2023 ದಿನಾಂಕ:30.01.2024ರಲ್ಲಿ ಬಿಡುಗಡೆ ಮಾಡಲಾಗಿದ್ದು, ಪೌರಕಾರ್ಮಿಕರಿಗೆ ಬಾಕಿ ವೇತನವನ್ನು ಪಾವತಿಸಲು ಪಾಲಿಕೆ ವತಿಯಿಂದ ಕ್ರಮವಹಿಸಲಾಗುತ್ತಿದೆ. |
| (ಆ) | ಬಂದಿದ್ದಲ್ಲಿ ಎಷ್ಟು ತಿಂಗಳಿಂದ ಪೌರಕಾರ್ಮಿಕರ ವೇತನ ನೀಡಿರುವುದಿಲ್ಲ; | |
| (ಇ) | ಬಾಕಿ ವೇತನವನ್ನು ನೀಡಲು ಪೌರಕಾರ್ಮಿಕರಿಗೆ ಅಧಿಕಾರಿಗಳು ಲಂಚದ ಬೇಡಿಕೆ ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

ನಅಇ 09 ವಿಮಪಾ 2024(ಇ)

12/02/2024

**(ಬಿ.ಎಸ್.ಸುರೇಶ)**
ನಗರಾಭಿವೃದ್ಧಿ ಹಾಗೂ ನಗರ ಯೋಜನೆ
ಸಚಿವರು